# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂ. 174-ಹೆಚ್.ಎಸ್.ಆರ್ ಬಡಾವಣೆ,

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)ಪಿಆರ್/35/2020-21 ದಿನಾಂಕ:22/09/2021 ಹಾಗೂ ನೋಡಲ್ ಅಧಿಕಾರಿ/ಜಂಟಿ ಆಯುಕ್ತರು (ಮಹದೇವಪುರ) ರವರು ದಿನಾಂಕ: 08.10.2021 ರಂದು ಬೆಳಿಗ್ಗೆ 10.00 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.174 ಹೆಚ್.ಎಸ್.ಆರ್ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿದ್ದು, ಸಭೆಯ ನಡವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

**ಹಾಜರಿದ್ದ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ, ಕಾರ್ಯದರ್ಶಿ, ಸದ್ಯಸರುಗಳು, ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು**

| ಕ್ರ.ಸಂ | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ ಆರ್. ವೆಂಕಟಚಾಲಪತಿ ಕ.ಆ.ಸೇ, | ನೋಡಲ್ ಅಧಿಕಾರಿ ವಾ.ನಂ.174 ಹಾಗೂ ಜಂಟಿ ಆಯುಕ್ತರು (ಮಹದೇವಪುರ) ವಲಯ | 9513322144 |
| 2 | ಶ್ರೀ ರಾಮೇಗೌಡ.ಕೆ.ಎಸ್ | ಕಾರ್ಯದರ್ಶಿ, ಸಹಾಯಕ ಅಭಿಯಂತರರು ವಾರ್ಡ್ ಸಂ.174 | 9480688174 |
| 3 | ಶ್ರೀ ಬಿ.ಎಸ್.ಆರ್ ರೆಡ್ಡಿ | ಸದಸ್ಯರು | 9989000017 |
| 4 | ಶ್ರೀ ಹೆಚ್.ಇ.ಚಂದ್ರಶೇಖರ್ | ಸದ್ಯಸರು | 9880987339 |
| 5 | ಶ್ರೀಮತಿ ಡಾ|| ಶಾಂತಿ, | ಸದ್ಯಸರು | 9036047199 |
| 6 | ಶ್ರೀ ಹನುಮಂತರಾಯ.ಟಿ | ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಚ್.ಎಸ್.ಆರ್ ಉಪವಿಭಾಗ/ಬೃಹತ್ ನೀರುಗಾಲುವೆ | 8105005285 |
| 7 | ಶ್ರೀ ನಾಗರಾಜ.ಎ | ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ) | 9845444037 |
| 8 | ಶ್ರೀ ರಾಮಚಂದ್ರ | ಸಹಾಯಕ ಕಂದಾಯ ಅಧಿಕಾರಿ, ಹೆಚ್.ಎಸ್.ಆರ್ ಉಪವಿಭಾಗ | 9480685984 |
| 9 | ಶ್ರೀ ವಿನೋದ್.ಜಿ | ಹಿ.ಆ.ಪ ವಾ.ಸಂ: 174 | 9844629911 |
| 10 | ಶ್ರೀ ಹರೀಶ್.ಹೆಚ್.ಆರ್ | ಅರಣ್ಯಾವಲಯಧಿಕಾರಿಗಳು | 9742612471 |
| 11 | ಶ್ರೀ ಸಾಯಿಬಣ್ಣ | ಸ.ಅ (ಬಿ.ಡಬ್ಲ್ಯೂ.ಎಸ್.ಎಸ್.ಬಿ) | 9845444039 |
| 12 | ಶ್ರೀ ರಾಮೇಶ್.ಡಿ | ಸ.ಅ ವಿದ್ಯುತ್ | 9480688559 |
| 13 | ಶ್ರೀ ಮಹೇಶ್ | ಬೀದಿ ದೀಪ | 9986041663 |

Scanned with

- ವಾರ್ಡ್ ಅಧ್ಯಕ್ಷರು/ನೋಡಲ್ ಅಧಿಕಾರಿರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿ/ನೌಕರರನ್ನು ಸದಸ್ಯರು ಹಾಗೂ ಸ್ಥಳೀಯ ನಾಗರೀಕ ಕಲ್ಯಾಣ ಸಂಘಗಳ ಪ್ರತಿನಿಧಿಗಳಿಗೆ ಸಭೆಗೆ ಸ್ವಾಗತಿಸುತ್ತಾ, ಹಿಂದಿನ ಸಭಾ ನಡವಳಿಯ ಪ್ರತಿ ಅಂಶದ ಬಗ್ಗೆ ಚರ್ಚಿಸಲಾಗಿ ಸಭೆಯನ್ನು ಪ್ರಾರಂಭಿಸಿದರು

- <u>ಘನತ್ಯಾಜ್ಯ ನಿರ್ವಹಣೆ:-</u>

  1. ಹಿಂದಿನ ಸಭೆಯ ದಿನಾಂಕ: 04.09.20212 ರಂದು ಸದ್ಯಸರು ರವರು ಪ್ರಸ್ತಾಪಿಸಿರುವಂತೆ ಹಾಗೂ ಇಂದಿನ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯ 14ನೇ ಅಡ್ಡ ರಸ್ತೆ, 19ನೇ ಅಡ್ಡ ರಸ್ತೆ, 27ನೇ ಮುಖ್ಯ ರಸ್ತೆ, ಮೆಕ್ಡೊನಾಲ್ಡ್ಸ್ ಸೆಕ್ಟರ್-7, ಬಿ.ಡಿ.ಎ ಕಾಂಪ್ಲೆಕ್ಸ್ ರಸ್ತೆಯ ಪಾದಚಾರಿ ಮಾರ್ಗದಲ್ಲಿ ಹೆಚ್ಚಾಗಿರುವ ತಳ್ಳುವ ಗಾಡಿಯನ್ನು ತೆರವುಗೊಳಿಸಲು ಶ್ರೀ ಬಿ.ಎನ್.ಆರ್ ರೆಡ್ಡಿ, ಶ್ರೀ ಚಂದ್ರಶೇಖರ್ ಮತ್ತು ಇತರೆ ಸದ್ಯಸರು, ಸ್ಥಳೀಯ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ರವರು ಸಭೆಯಲ್ಲಿ ತಿಳಿಸಿದ್ದು, ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಶ್ರೀ ವಿನೋದ್.ಜಿ ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಸಹಾಯಕ ಕಾರ್ಯಪಾಲಕ ಅಭಿಯಂತರರು, ಪೋಲೀಸ್ ಇಲಾಖೆ ರವರೊಂದಿಗೆ ಜಂಟಿಯಾಗಿ ತಪಾಸಣೆ ಮಾಡಿ ಕ್ರಮವಹಿಸುವುದಾಗಿ ಸಭೆಗೆ ತಿಳಿಸಿದರು.

- <u>ವಿದ್ಯುತ್ ವಿಭಾಗ :-</u>

  1. ಹೆಚ್.ಎಸ್.ಆರ್ ಬಡಾವಣೆ ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳ ವ್ಯವಸ್ಥೆ, ನಿರ್ವಹಣೆ, ಹಾಗೂ ದುರಸ್ಥಿ ಪಡಿಸಿ, ಟೈಮರ್ ಅಳವಡಿಸಲು ಸದಸ್ಯರು ಕೋರಿರುತ್ತಾರೆ. ಈ ಬಗ್ಗೆ ಸಹಾಯಕ ಅಭಿಯಂತರರು, (ವಿದ್ಯುತ್ ವಿಭಾಗ) ರವರಿಗೆ ಕ್ರಮವಹಿಸುವಂತೆ ಅಧ್ಯಕ್ಷರು ಸೂಚಿಸಿರುತ್ತಾರೆ.
  2. ಹೆಚ್.ಎಸ್.ಆರ್ ಬಡಾವಣೆ ವಾರ್ಡ್ ವ್ಯಾಪ್ತಿಯಲ್ಲಿ ಉದ್ಯಾನವನಗಳಲ್ಲಿ ಅಳವಡಿಸಿರುವ ವಿದ್ಯುತ್ ಪೆಟ್ಟಿಗೆಯು ತೆಗದಿದ್ದು ಇದರಿಂದ ಹಿರಿಯ ನಾಗರೀಕರಿಗೆ ಮತ್ತು ಮಕ್ಕಳಿಗೆ ಅವಗಢ ಸಂಭವಿಸುವುದರಿಂದ ವಿದ್ಯುತ್ ಪೆಟ್ಟಿಗೆಯನ್ನು ಮುಚ್ಚಿಸುವಂತೆ ಶ್ರೀ ಬಿ.ಎನ್.ಆರ್ ರೆಡ್ಡಿ, ಶ್ರೀ ಚಂದ್ರಶೇಖರ್ ಮತ್ತು ಇತರೆ ಸದ್ಯಸರು, ಸ್ಥಳೀಯ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ರವರು ಸಭೆಯಲ್ಲಿ ತಿಳಿಸಿದ್ದು, ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಶ್ರೀ ರಾಮೇಶ್.ಡಿ ರವರು ಕ್ರಮವಹಿಸುವುದಾಗಿ ಸಭೆಗೆ ತಿಳಿಸಿದರು.

- <u>ತೋಟಗಾರಿಕೆ :-</u>

  1. ಹೆಚ್.ಎಸ್.ಆರ್ ಬಡಾವಣೆ ವ್ಯಾಪ್ತಿಯ ಸ್ವಭಿಮಾನ ಉದ್ಯಾನವನವನ್ನು ಭದ್ರತೆ ಸಿಬ್ಬಂದಿ ಸರಿಯಾದ ಸಮಯಕ್ಕೆ ಉದ್ಯಾನವನ್ನು ತೆರೆಯುತ್ತಿಲ್ಲ ವೆಂದು ಶ್ರೀ ಬಿ.ಎನ್.ಆರ್ ರೆಡ್ಡಿ, ಶ್ರೀ ಚಂದ್ರಶೇಖರ್ ಮತ್ತು ಇತರೆ ಸದ್ಯಸರು, ಸ್ಥಳೀಯ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ರವರು ಸಭೆಯಲ್ಲಿ ತಿಳಿಸಿದ್ದು, ಈ ಬಗ್ಗೆ ಸಭೆಗೆ ಗೈರುಹಾಜರಾಗಿದ್ದ ತೋಟಗಾರಿಕೆ ಅಧಿಕ್ಷಕರನ್ನು ಮುಂದಿನ ಸಭೆಯಲ್ಲಿ ಹಾಜರಾಗುವಂತೆ ಸಭೆಯಲ್ಲಿ ಅಧ್ಯಕ್ಷಕರು/ನೋಡಲ್ ಅಧಿಕಾರಿಗಳು ಸೂಚಿಸಿದರು.

- <u>ಅರಣ್ಯ ಇಲಾಖೆ :-</u>

  1. ಹೆಚ್.ಎಸ್.ಆರ್ ಬಡಾವಣೆ ವ್ಯಾಪ್ತಿಯ 9ನೇ ಮುಖ್ಯ ರಸ್ತೆ, ಸೆಕ್ಟರ್ 7 ಮತ್ತು ಸುತ್ತಮುತ್ತಲ್ಲಿನ ಪ್ರದೇಶಗಳಲ್ಲಿ ಅನಧಿಕೃತವಾಗಿ ಮರಗಳನ್ನು ಕಡೆಯುತ್ತಿದ್ದು ಎಷ್ಟು ಬಾರಿ ಅರಣ್ಯ ಇಲಾಖೆ ರವರಿಗೆ ದೂರು ನೀಡಿದರೂ ಸದರಿ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ವೆಂದು ಶ್ರೀಮತಿ ಡಾ॥ ಶಾಂತಿ, ಸದ್ಯಸರು ರವರು ಸಭೆಯ ಗಮನಕ್ಕೆ ತಂದಿರುತ್ತಾರೆ. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಅರಣ್ಯಾವಲಯಧಿಕಾರಿಗಳು ಪ್ರತ್ಯೇಕವಾಗಿ ದೂರನ್ನು ನೀಡಿದರೆ ಕ್ರಮವಹಿಸಲಾಗುವುದೆಂದು ಸಭೆಗೆ ತಿಳಿಸಿದರು.
  2. ಹೆಚ್.ಎಸ್.ಆರ್ ಬಡಾವಣೆ ವ್ಯಾಪ್ತಿಯಲ್ಲಿ Low Laying ಕೊಂಬೆಗಳು ವಾಹನ ಸಾವರರಿಗೆ ಮತ್ತು ಸ್ಥಳೀಯರಿಗೆ ಮತ್ತು ಓಡಾಡುವ ಸಾರ್ವಜನಿಕರಿಗೆ ತಗಲುವ ಸಾಧ್ಯತೆ ಇರುವುದರಿಂದ ಸ್ಥಳವನ್ನು ಪರೀಶೀಲಿಸಿ ತೆರವುಗೊಳಿಸಲು ಕ್ರಮವಹಿಸುವಂತೆ ಶ್ರೀ ಬಿ.ಎನ್.ಆರ್ ರೆಡ್ಡಿ, ಶ್ರೀ ಚಂದ್ರಶೇಖರ್ ಮತ್ತು ಇತರೆ ಸದ್ಯಸರು ಸಭೆಗೆ ತಿಳಿಸಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಅರಣ್ಯಾವಲಯಧಿಕಾರಿಗಳು ಸ್ಥಳ ಪರೀಶೀಲಿಸಿ ಕ್ರಮವಹಿಸುವುದಾಗಿ ಸಭೆಗೆ ತಿಳಿಸಿದರು.

- <u>ಕಂದಾಯ ಇಲಾಖೆ :-</u>

  1. ಹೆಚ್.ಎಸ್.ಆರ್ ಬಡಾವಣೆ ವ್ಯಾಪ್ತಿಯಲ್ಲಿ ಖಾಲಿ ನಿವೇಶನಗಳಲ್ಲಿ ಶೆಡ್‌ಗಳನ್ನು ಹಾಕಿಕೊಂಡಿದ್ದು, ಖಾಲಿ ನಿವೇಶನದ ಮಾಲೀಕರಿಗೆ ಕಂದಾಯ ಪಾವತಿಸುವಂತೆ ಸೂಚಿಸಲು ಹಾಗೂ ಖಾಲಿ ನಿವೇಶನದ ಪಟ್ಟಿಗಳನ್ನು ಮಾಡುವಂತೆ ಹಾಗೂ ಕಾರ್ನರ್ ಸೈಟ್‌ಗಳ ವಾಣಿಜ್ಯ ಪ್ರದೇಶಗಳನ್ನು ಸರ್ವೆ ಮಾಡಲು ಶ್ರೀ ಬಿ.ಎನ್.ಆರ್

**(ಮು.ತಿ.ನೋ)**

ರೆಡ್ಡಿ, ಶ್ರೀ ಚಂದ್ರಶೇಖರ್ ಮತ್ತು ಇತರೆ ಸದ್ಯಸರು ಸಭೆಗೆ ತಿಳಿಸಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸಹಾಯಕ ಕಂದಾಯ ಅಧಿಕಾರಿ ರವರು ಸರ್ವೆ ಮಾಡಿ ಪಟ್ಟಿಗಳನ್ನು ಮುಂದಿನ ಸಭೆಯಲ್ಲಿ ಹಾಜರು ಪಡಿಸಲಾಗುವುದೆಂದು ಸಭೆಗೆ ತಿಳಿಸಿದರು.

2. ಹೆಚ್.ಎಸ್.ಆರ್ ಬಡಾವಣೆ ವಾರ್ಡ್ ವ್ಯಾಪ್ತಿಯಲ್ಲಿ ಕಂದಾಯ ಪಾವತಿ ಮಾಡಿರುವವರಿಗೆ ದಂಡ ಪಾವತಿಸಲು ನೋಟೀಸ್ ಜಾರಿ ಮಾಡಲಾಗಿರುತ್ತದೆ ಎಂದು ಸದಸ್ಯರಾದ ಶ್ರೀ ಬಿ.ಎಸ್.ಆರ್ ರೆಡ್ಡಿ, ಶ್ರೀ ಚಂದ್ರಶೇಖರ್ ಮತ್ತು ಇತರೆ ಸದ್ಯಸರು ಸಭೆಗೆ ತಿಳಿಸಿದರು. ಈ ಬಗ್ಗೆ ಸಹಾಯಕ ಕಂದಾಯ ಅಧಿಕಾರಿ ರವರು ಹೆಚ್.ಎಸ್.ಆರ್ ಬಡಾವಣೆ ವಾರ್ಡ್ ವಸತಿ ವಲಯವು ಸಬ್ ರಿಜಿಸ್ಟ್ರಾರ್ ಮೌಲ್ಯದಂತೆ 2020 ರಲ್ಲಿ B to F Zone ಬರುವುದರಿಂದ Computerised ರಲ್ಲಿ ಕಂದಾಯ ಪಾವತಿಸದವರೆಗೆ 2% ತಿಂಗಳಿಗೆ 24% ವರ್ಷದಂತೆ ದಂಡ ಪಾವತಿಸುವಂತೆ ನೋಟಿಸ್ ಜಾರಿಮಾಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

- <u>ಕಾಮಗಾರಿ ಇಲಾಖೆ :-</u>

1. ಮಾನ್ಯ ಮುಖ್ಯ ಆಯುಕ್ತರು ಬಿಬಿಎಂಪಿ ರವರ ಆದೇಶದಂತೆ ರಸ್ತೆಗಳಲ್ಲಿನ ರಸ್ತೆ ಗುಂಡಿಗಳನ್ನು ನಿಗಧಿತ ಸಮಯದಲ್ಲಿ ಮುಚ್ಚು ಬಗ್ಗೆ ಮತ್ತು ಮಾನ್ಯ ಮುಖ್ಯ ಆಯುಕ್ತರವರಿಗೆ ದೈನಂದಿನ ಮಾಹಿತಿಯನ್ನು ಒದಗಿಸುವ ಬಗ್ಗೆ ಕ್ರಮವಹಿಸಲು ಅಧ್ಯಕ್ಷರು / ನೋಡಲ್ ಅಧಿಕಾರಿರವರು ಸಭೆಯಲ್ಲಿ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ಸಹಾಯಕ ಅಭಿಯಂತರರಿಗೆ ಸೂಚಿಸಿದರು.
2. ಇತ್ತೀಚಿಗೆ ಕೋರಮಂಗಲ, ಡೈರಿ ಸರ್ಕಲ್, ಅಮೂಲ ವಸತಿ ಗೃಹ ಮುಂತದ ಸಿಥತ ಕಟ್ಟಡಗಳು ಕುಸಿಯುತ್ತಿದ್ದು ಅದರಂತೆ ಹೆಚ್.ಎಸ್.ಆರ್ ಬಡಾವಣೆ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಾಣ ಮಾಡಿರುವ ಖಾಸಿಗೆ ಕಟ್ಟಡಗಳನ್ನು ಮತ್ತು ಸಿಥಲ ಕಟ್ಟಡಗಳನ್ನು ಮಾನ್ಯ ಮುಖ್ಯ ಆಯುಕ್ತರ ರವರ ಆದೇಶದಂತೆ ಸರ್ವೆ ಮಾಡಲು ಅಧ್ಯಕ್ಷರು / ನೋಡಲ್ ಅಧಿಕಾರಿರವರು ಸಭೆಯಲ್ಲಿ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ಸಹಾಯಕ ಅಭಿಯಂತರರಿಗೆ ಸೂಚಿಸಿದರು.

ಅಂತಿಮವಾಗಿ ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ ರವರು, ವಾರ್ಡ್ ನಂ. 174 ಹಾಗೂ ಸ.ಕಾ.ನಿ.ಅ. (ಎಸ್.ಡಬ್ಲ್ಯೂ.ಡಿ) ರವರು ಸಭೆಯಲ್ಲಿ ಚರ್ಚಿಸಲಾದ ಎಲ್ಲಾ ವಿಷಯಗಳ ಬಗ್ಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿ ರವರು ತುರ್ತು ಕ್ರಮವಹಿಸಲು ಸೂಚಿಸಿದರು ಹಾಗೂ ಸಾರ್ವಜನಿಕರು ನೀಡಿರುವ ದೂರಿನ ಬಗ್ಗೆ ಅಗತ್ಯ ಕ್ರಮವಹಿಸುವುದಾಗಿ ತಿಳಿಸುತ್ತಾ ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ವಂದನೆಗಳನ್ನು ಸಲ್ಲಿಸುವುದರ ಮೂಲಕ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

8/10/2021

ಕಾರ್ಯದರ್ಶಿ, ವಾರ್ಡ್ ನಂ.174ರ
ಸಹಾಯಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

8/10/21

ಅಧ್ಯಕ್ಷರು/ನೋಡಲ್ ಅಧಿಕಾರಿ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:-**

1) ಮಾನ್ಯ ಆಡಳಿತಗಾರರು, ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ
2) ಮಾನ್ಯ ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ.ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮಾನ್ಯ ವಲಯ ಆಯುಕ್ತರು, ಬೊಮ್ಮನಹಳ್ಳಿ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ
4) ಮಾನ್ಯ ವಿಶೇಷ ಆಯುಕ್ತರು, (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
5) ಜಂಟಿ ಆಯುಕ್ತರು (ಬೊಮ್ಮನಹಳ್ಳಿ ವಲಯ) ರವರ ಅವಗಾಹನೆಗಾಗಿ ಸಲ್ಲಿಸಿದೆ
6) ವಾರ್ಡ್ ಸಮಿತಿಯ ಸದಸ್ಯರ / ಸ್ವಯಂ ಸೇವಕರ ಮಾಹಿತಿಗಾಗಿ ಸಲ್ಲಿಸಿದೆ.
7) ಕಛೇರಿ ಪ್ರತಿ.

Scanned with